ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ಗ್ರಾಮದಲ್ಲಿ ದೃಶ್ಯ ಸ್ವಚ್ಛತೆ ಕಾಪಾಡಲು ಇಂಗು ಗುಂಡಿಗಳ ನಿರ್ಮಾಣ





ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಹಂಗರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ದೃಶ್ಯ ಸ್ವಚ್ಛತೆ ಕಾಪಾಡಲು ಇಂಗು ಗುಂಡಿಗಳ ನಿರ್ಮಾಣ ಮಾಡಲಾಗಿದೆ. ಸ್ವಚ್ಛ ಭಾರತ್ ಮಿಷನ್(ಗ್ರಾ) ಹಂತ ಎರಡರ ಅಡಿಯಲ್ಲಿ ಕುಟುಂಬಗಳಲ್ಲಿ ಉತ್ಪಾದನೆಯಾಗುವ ಘನ ತ್ಯಾಜ್ಯವನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಸ್ವಚ್ಛ ಸಂಕೀರ್ಣಗಳು ಕಾರ್ಯನಿರ್ವಹಿಸುತ್ತಿವೆ. ಮನೆಗಳಲ್ಲಿ ದಿನನಿತ್ಯ ಬಳಸಿದ ಬೂದುನೀರನ್ನು ಚರಂಡಿಗಳ ಮೂಲಕ ವಿಲೇವಾರಿ ಮಾಡಲಾಗುತ್ತಿದೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅಸಮರ್ಪಕ ಚರಂಡಿ ವ್ಯವಸ್ಥೆ ಮತ್ತು ಜಾಗದ ಅಭಾವದಿಂದ ದಿನ ನಿತ್ಯ ಬಳಸಿದ ಬೂದು ನೀರು ಸಾರ್ವಜನಿಕ ರಸ್ತೆಗಳ ಮೇಲೆ ಹರಿಯುತ್ತಿರುವುದು ಕಂಡು ಬರುತಿತ್ತು ಹಾಗೂ ಗ್ರಾಮದ ರಸ್ತೆಗಳು ಸ್ವಚ್ಛತೆಯಿಂದ ಕೂಡಿಲ್ಲದೆ ಗ್ರಾಮಗಳಲ್ಲಿ ಸಾಂಕ್ರಾಮಿಕ ರೋಗಗಳು ಹರಡುತ್ತಿದ್ದವು.





ಹಂಗರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಇದನ್ನು ತಡೆಗಟ್ಟಲು ಜಾಗದ ಲಭ್ಯತೆಯಿರುವ ಕುಟುಂಬಗಳಲ್ಲಿ ಇಂಗುಗುಂಡಿಗಳನ್ನು ನಿರ್ಮಿಸಲಾಯಿತು. ಇಂಗು ಗುಂಡಿ ನಿರ್ಮಾಣ ಮಾಡಲು ಪ್ರತಿಯೊಂದು ಮನೆಗೆ ಭೇಟಿ ನೀಡಿ ಅರಿವು ಮೂಡಿಸಲಾಯಿತು. ಸ್ವಚ್ಛತೆಯನ್ನು ಕಾಪಾಡಿ, ರಸ್ತೆ ಮೇಲೆ ಹರಿಯುವ ತ್ಯಾಜ್ಯ ನೀರನ್ನು ತಡೆಗಟ್ಟಲು, ಸಾಂಕ್ರಾಮಿಕ ರೋಗಗಳು ಹರಡುವುದನ್ನು ನಿಯಂತ್ರಣಗೊಳಿಸಲು ಮತ್ತು ಅಂತರ್ಜಲ ವೃದ್ಧಿಯಾಗಲು ಇಂಗು ಗುಂಡಿಗಳ ನಿರ್ಮಾಣ ಅಗತ್ಯವೆಂದು ಅರಿವು ಮೂಡಿಸಿ ಇಂಗು ಗುಂಡಿಗಳನ್ನು ನಿರ್ಮಾಣ ಮಾಡಲಾಯಿತು.

ಮೊದಲಿಗೆ ಊರಿನ ಜನರು ಅರಿವಿನ ಕೊರತೆಯ ಕಾರಣ ಯೋಜನೆಗೆ ವಿರೋಧ ವ್ಯಕ್ತಪಡಿಸಿ ಸಹಕಾರ ತೋರಲಿಲ್ಲ, ಗ್ರಾಮೀಣ ಜನರಿಗೆ ಬೂದು ನೀರಿನಿಂದ ನಿರ್ವಹಣೆಯಿಂದ ಆಗುವ ಅನುಕೂಲಗಳ ಕುರಿತು ವಿವರಿಸಲಾಯಿತು. ಗ್ರಾಮ ಪಂಚಾಯಿತಿಗಳಲ್ಲಿ ದ್ರವ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ತರಬೇತಿ, ಮನೆ ಮನೆ ಬೇಟಿ, ಕಿರುಚಿತ್ರ ಪ್ರದರ್ಶನ, ಗೋಡೆ ಬರಹ ಮುಂತಾದ ಚಟುವಟಿಕೆಗಳ ಮೂಲಕ ಅರ್ಥೈಸಿ, ಅವರ ಸಂದೇಹ ದೂರ ಮಾಡಿ ಈ ಸಮಸ್ಯೆ ಪರಿಹರಿಸಲಾಯಿತು.





ಜಿಲ್ಲಾ ಹಂತದಲ್ಲಿ ನೋಡಲ್ ಅಧಿಕಾರಿಗಳು, ತಾಲ್ಲೂಕು ಹಂತದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು ನೇತೃತ್ವದಲ್ಲಿ ಜಿಲ್ಲಾ ಎಸ್.ಬಿ.ಎಂ.ಜಿ. ಸಮಾಲೋಚಕರು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಸ್ಥಳೀಯ ಜನ ಪ್ರತಿನಿಧಿಗಳು ಒಟ್ಟಾಗಿ ಬೂದು ನೀರು ನಿರ್ವಹಣೆ ಕಾಮಗಾರಿ ಕೈಗೊಂಡರು. ಯೋಜನೆಯನ್ನು ಅಂದಾಜು ರೂ.1.59,000/- ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಯಿತು. ಯೋಜನೆಯ ಸುಸ್ಥಿರ ಕಾರ್ಯಾಚರಣೆಗಾಗಿ ನಿರಂತರವಾಗಿ ಫಿಲ್ಟರ್ಗಳನ್ನು ಸ್ವಚ್ಛ ಮಾಡುವುದು, ಸಮುದಾಯ, ಸಂಘ ಸಂಸ್ಥೆಗಳು ನಿರಂತರ ಅನುಸರಣೆ ಮತ್ತು ನಿರ್ವಹಣೆ ಮಾಡುತ್ತಿವೆ.

ನೀರು ಅಮೂಲ್ಯವಾದ ಸಂಪತ್ತು. ನೀರನ್ನು ಜವಾಬ್ದಾರಿಯುತವಾಗಿ ಬಳಸೋಣ ಮತ್ತು ಮರುಬಳಕೆ ಮಾಡೋಣ. ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛ ಮತ್ತು ಸುಂದರವಾಗಿಟ್ಟುಕೊಳ್ಳೋಣ.

**ನೀರು ಮತ್ತು ನೈರ್ಮಲ್ಯ ಕುರಿತ ಸಮಸ್ಯೆಗಳಿಗೆ**
**ಪರಿಹಾರ ಸಹಾಯವಾಣಿ 9480985555 ಗೆ ಕರೆ ಮಾಡಿ**